

ಹುಬ್ಬಳ್ಳಿ ವಿಮಾನ ನಿಲ್ದಾಣ

ಕಾರಿಡಾರ್ ನಿರ್ಮಾಣಕ್ಕೂ ತುಮಕೂರು ಪ್ರಶಸ್ತ ಎಂದೇ ಹೇಳಲಾಗುತ್ತಿದೆ.

ಆರಂಭದಲ್ಲಿ ಎಚ್‌ಎಎಲ್ ನಿಲ್ದಾಣವನ್ನೇ ಮರಳಿ ಆರಂಭಿಸುವ ಚಿಂತನೆ ಸರ್ಕಾರದ್ದಾಗಿತ್ತು. ಆದರೆ, ವಿಸ್ತರಣೆಗೆ ಜಾಗದ ಕೊರತೆಯಿಂದಾಗಿ ಬೆಂಗಳೂರಿನ ಹೊರಗೆ ವಿಮಾನ ನಿಲ್ದಾಣ ನಿರ್ಮಿಸುವ ಗುರಿಯನ್ನು ಸರ್ಕಾರ ಹೊಂದಿದೆ.

ತುಮಕೂರು ಭಾಗದಲ್ಲಿ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ಒತ್ತಾಸೆಯೂ ಇದೆ ಎಂದೆನ್ನಲಾಗಿದೆ. ಈ ಎಲ್ಲದರ ಪರಿಣಾಮವಾಗಿ ನೆಲಮಂಗಲ ಹಾಗೂ ತುಮಕೂರುಗಳತ್ತ ಸಾಗುವ ರಸ್ತೆಯ ಇಕ್ಕೆಲಗಳಲ್ಲಿ ರಿಯಲ್ ಎಸ್ಟೇಟ್ ಗರಿಗೆದರಿದೆ.

ಪ್ರವಾಸೋದ್ಯಮ, ಸರಕು ಸಾಗಣೆ, ಕೈಗಾರಿಕೆಗಳ ಅಭಿವೃದ್ಧಿಗೆ ಉತ್ತೇಜನ ನೀಡಲು ವಿಮಾನ ನಿಲ್ದಾಣಗಳು ಅಗತ್ಯ. ಆದರೆ ರಾಜ್ಯದಲ್ಲಿ ಈ ಹಿಂದೆ ಘೋಷಣೆಯಾದ ಯೋಜನೆಗಳು ಈಗಲೂ ಆಮೆಗತಿಯಲ್ಲೇ ಸಾಗುತ್ತಿವೆ. ಕಾರವಾರ, ಬಳ್ಳಾರಿ, ರಾಯಚೂರು, ಕೊಪ್ಪಳ, ದಾವಣಗೆರೆ ವಿಮಾನ ನಿಲ್ದಾಣಗಳ ಕಾಮಗಾರಿಯೇ ಟೇಕಾಫ್ ಆಗಿಲ್ಲ.

ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಜೊತೆ ಮಂಗಳೂರು, ಬೆಳಗಾವಿ, ಹುಬ್ಬಳ್ಳಿ, ಕಲಬುರಗಿ, ಮೈಸೂರು, ಬೀದರ್, ವಿಜಯನಗರ ವಿಮಾನ ನಿಲ್ದಾಣಗಳು ವಾಣಿಜ್ಯ ವಿಮಾನಗಳನ್ನು ನಿರ್ವಹಿಸುತ್ತಿವೆ.

**ಬೆಳಗಾವಿ ಸಾಂಬ್ರಾ ವಿಮಾನ ನಿಲ್ದಾಣ**

2024ರ ಫೆಬ್ರುವರಿಯಲ್ಲಿ ಒಟ್ಟು ಪ್ರಯಾಣಿಕರು **29,530**

ಶೇ. **80.6**ರಷ್ಟು ಏರಿಕೆ.

ಸ್ಪೈಸ್ ಜೆಟ್ ಕಾರ್ಯಾಚರಣೆ ಸ್ಥಗಿತಗೊಂಡ ನಂತರ, ಬೆಳಗಾವಿ–ದೆಹಲಿ ನಡುವೆ ಇಂಡಿಗೊ ನಿತ್ಯ ವಿಮಾನ ಹಾರಾಟ ಆರಂಭಿಸಿದೆ. ಇದು ಶೇ. **70**ರಷ್ಟು ಭರ್ತಿಯಾಗಿರುತ್ತದೆ.

## ಬೆಂಗಳೂರಿನಾಚೆಗೂ ಬೆಳ್ಳಿಮಿಂಚು

ಜಾಗತಿಕ ಮಟ್ಟದಲ್ಲಿ ಖ್ಯಾತಿ ಪಡೆದಿರುವ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಬಿಟ್ಟರೆ, ರಾಜ್ಯದ ಎರಡನೇ ಅತೀ ಹೆಚ್ಚು ಪ್ರಯಾಣಿಕ ದಟ್ಟಣೆಯ ವಿಮಾನ ನಿಲ್ದಾಣ ಮಂಗಳೂರಿನದ್ದು.

ವಿಮಾನ ನಿಲ್ದಾಣಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ 'ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ'ವನ್ನು (ಕೆಎಸ್‌ಐಐಡಿಸಿ) ನೋಡಲ್ ಏಜೆನ್ಸಿಯಾಗಿ ರಾಜ್ಯ ಸರ್ಕಾರ ನೇಮಿಸಿದೆ. ಕೇಂದ್ರ ಸರ್ಕಾರದ ಪ್ರಾದೇಶಿಕ ಸಂಪರ್ಕ ಯೋಜನೆ 'ಉಡಾನ್' (ಉಡೇ ದೇಶ್ ಕಾ ಆಮ್ ನಾಗರಿಕ್) ಅನುಸಾರ ವಿಮಾನ ನಿಲ್ದಾಣ, ಏರ್‌ಸ್ಟ್ರಿಪ್‌ಗಳ ಅಭಿವೃದ್ಧಿಗೆ ಕೆಎಸ್‌ಐಡಿಸಿ ಮುಂದಾಗಿದೆ. ಆದರೆ, 'ಉಡಾನ್'ಗೆ ಪೂರಕವಾಗಿ ರಾಜ್ಯದಲ್ಲಿ ವಿಮಾನ ನಿಲ್ದಾಣಗಳು ನಿರ್ಮಾಣ ಆಗಿಲ್ಲ ಎನ್ನುವ ಆರೋಪಗಳಿವೆ.

ಶಿವಮೊಗ್ಗ, ವಿಜಯಪುರ, ಹಾಸನ, ರಾಯಚೂರು, ದಾವಣಗೆರೆ, ಕೊಪ್ಪಳ, ಬಳ್ಳಾರಿ, ಕಾರವಾರ ಸೇರಿ ರಾಜ್ಯದ 14 ಜಿಲ್ಲೆಗಳಲ್ಲಿ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣ ಸ್ಥಾಪಿಸಲು ಉದ್ದೇಶಿಸಲಾಗಿದೆ. ಸದ್ಯ ಶಿವಮೊಗ್ಗ ವಿಮಾನ ನಿಲ್ದಾಣ ಕಾರ್ಯಾಚರಣೆ ಆರಂಭವಾಗಿದೆ. ವಿಜಯಪುರ ವಿಮಾನ ನಿಲ್ದಾಣದ ಕಾಮಗಾರಿಯೂ ಇಷ್ಟೊತ್ತಿಗೆ ಮುಗಿಯಬೇಕಿತ್ತು. ಆದರೆ ಕಾಮಗಾರಿ ಆಮೆಗತಿಯಲ್ಲಿದೆ.

ಶಿವಮೊಗ್ಗ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣೆಯನ್ನು ಕೇಂದ್ರ ನಾಗರಿಕ ವಿಮಾನಯಾನ ನಿರ್ದೇಶನಾಲಯವು ಕೆಎಸ್‌ಐಐಡಿಸಿಗೆ ವಹಿಸಿದೆ. ಆ ಮೂಲಕ, ರಾಜ್ಯ ಸರ್ಕಾರದ ಸಂಸ್ಥೆಯೊಂದು ನಿರ್ವಹಿಸುತ್ತಿರುವ ರಾಜ್ಯದ ಮೊದಲ ವಿಮಾನ ನಿಲ್ದಾಣ ಇದಾಗಿದೆ.

## ರಾಜ್ಯದ ವಿಮಾನ ನಿಲ್ದಾಣಗಳ ಸ್ಥಿತಿಗತಿ

ರಾಜ್ಯದ ವಿಮಾನ ನಿಲ್ದಾಣಗಳಲ್ಲಿ ಪ್ರಯಾಣಿಕರ ಸಂಖ್ಯೆ ನಿಧಾನವಾಗಿ ಏರುತ್ತಿದೆ. ಸದ್ಯದ ಮಾಹಿತಿ ಪ್ರಕಾರ ಇದರ ಬೆಳವಣಿಗೆ ಶೇ. 8ರ ದರದಲ್ಲಿದೆ.

ಬೆಂಗಳೂರು, ಮಂಗಳೂರು ಹಾಗೂ ಬೆಳಗಾವಿ ವಿಮಾನ ನಿಲ್ದಾಣಗಳಲ್ಲಿ ಪ್ರಯಾಣಿಕರ ಸಂಖ್ಯೆಯಲ್ಲಿ ಏರಿಕೆಯಾಗಿದೆ. ಇಲ್ಲಿಂದ ಹಾರಾಟ ನಡೆಸುವ ವಿಮಾನಗಳ ಸಂಖ್ಯೆಯೂ ಹೆಚ್ಚಳವಾಗಿದೆ. ಆದರೆ ಮೈಸೂರು, ಕಲಬುರ್ಗಿ ಮತ್ತು ಹುಬ್ಬಳ್ಳಿಯಲ್ಲಿ ನಿರೀಕ್ಷಿತ ಮಟ್ಟದಲ್ಲಿ ಏರಿಕೆಯಾಗಿಲ್ಲ ಎಂಬುದು ವಾಸ್ತವ.

ದೇಶದ ಇತರ ವಿಮಾನ ನಿಲ್ದಾಣಗಳ ಮಾಹಿತಿ ಅನ್ವಯ, ಅಂತರರಾಷ್ಟ್ರೀಯ ಸಂಚಾರದಲ್ಲಿ ಶೇ. 19.3ರಷ್ಟು ಏರಿಕೆಯಾಗಿದೆ. 2024ರ ಫೆಬ್ರುವರಿವರೆಗಿನ ಮಾಹಿತಿ ಅನ್ವಯ 59 ಲಕ್ಷ ಜನ ಪ್ರಯಾಣಿಸಿದ್ದಾರೆ. 2023ರಲ್ಲಿ ಇದೇ ಅವಧಿಯಲ್ಲಿ 49 ಲಕ್ಷ ಪ್ರಯಾಣಿಕರು ವಿಮಾನ ಮೂಲಕ ಸಂಚರಿಸಿದ್ದರು. ಇದೇ ಅವಧಿಯಲ್ಲಿ ದೇಶೀಯ ವಿಮಾನಯಾನದಲ್ಲಿ ಶೇ 5.8ರಷ್ಟು ವೃದ್ಧಿ ಕಂಡಿದೆ. ಒಟ್ಟು 2.5 ಕೋಟಿ ಜನ ದೇಶದೊಳಗೆ ಸಂಚರಿಸಿದ್ದಾರೆ.

ಇಲ್ಲಿಯವರೆಗೆ ವಾಯುಯಾನ ಎನ್ನುವುದು ಜನಸಾಮಾನ್ಯರಿಗೆ ಗಗನಕುಸುಮದಂತೆ ಕಾಣಿಸುತ್ತಿತ್ತು. ಬದಲಾದ ಸಂದರ್ಭದಲ್ಲಿ ವಿಮಾನಯಾನ ಕೈಗೊಳ್ಳುವವರ ಸಂಖ್ಯೆ ಏರುಮುಖದಲ್ಲಿದೆ. ಎಲ್ಲರ ಮನಸ್ಸುಗಳ ಅಂಗಳದಲ್ಲೂ ವಿಮಾನಗಳ ನೆರಳು ಕಾಣಿಸುತ್ತಿದೆ.



ದೆಹಲಿಯ ಇಂದಿರಾಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪದಲ್ಲಿರುವ ಸಿಂಹದ ಶಿಲ್ಪಗಳು

ಪ್ರತಿಕ್ರಿಯಿಸಿ: feedback@sudha.co.in